# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **697**
ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : **21.02.2024**
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ನೀರಿನ ಆಶ್ರಯಕ್ಕೆ ಪಾರಂಪರಿಕವಾಗಿ ನಿರ್ಮಿಸಿದ ಬಹುತೇಕ ಕೆರೆಗಳು ರಾಜ್ಯಾದ್ಯಂತ ಒತ್ತುವರಿಗೊಂಡು ಕಟ್ಟಡ ಹಾಗೂ ಕೃಷಿಯೇತರ ಚಟುವಟಿಕೆಯ ಪಾಲಾಗಿರುವುದು ನಿಜವೇ; ಕೆರೆಗಳ ಒತ್ತುವರಿ ತೆರವಿಗೆ ಲೋಕಾಯುಕ್ತವು ಸೋಮೋಟೋ ಅಸ್ತ್ರ ಉಪಯೋಗಿಸಿದ್ದು, ಬೆಳ್ತಂಗಡಿ ತಾಲ್ಲೂಕಿಗೆ ಸಂಬಂಧಿಸಿದಂತೆ ಪಟ್ಟಣ ಹಾಗೂ ತಾಲ್ಲೂಕಿನ 81 ಗ್ರಾಮಗಳಲ್ಲಿ ಸದ್ಯ 76 ಸಾರ್ವಜನಿಕ ಕೆರೆಗಳಿದ್ದು, ಸದರಿ ಕೆರೆಗಳ ಒತ್ತುವರಿ ತಡೆಯುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ಒದಗಿಸುವುದು) | ಭೂ ಕಬಳಿಕೆ ಮತ್ತು ಕೆರೆ ಒತ್ತುವರಿ ಮಾಡಿರುವವರ ವಿರುದ್ಧ ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 192 (ಎ)(1)ರಂತೆ ಕ್ರಮ ಕೈಗೊಂಡು ಒತ್ತುವರಿಯನ್ನು ತೆರವುಗೊಳಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.<br><br>ಮುಂದುವರೆದು, ದಕ್ಷಿಣ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿಗೆ ಸಂಬಂದಿಸಿದಂತೆ ಒತ್ತುವರಿ ಕಟ್ಟಡ ಇರುವುದಿಲ್ಲ ಹಾಗೂ ಕೃಷಿಯೇತರ ಚಟುವಟಿಕೆಗಳ ಪಾಲಾಗುತ್ತಿರುವುದಿಲ್ಲ. ಸದರಿ ಕೆರೆಗಳ ತೆರವಿಗೆ ಲೋಕಾಯುಕ್ತವು ಸ್ವಂಪ್ರೇರಿತ ದೂರು ದಾಖಲಿಸಿದ್ದು, ಈ ಸಂಬಂಧ ಬೆಳ್ತಂಗಡಿ ತಾಲ್ಲೂಕಿನ 76 ಕೆರೆಗಳ ಗಡಿ ಗುರುತಿಸಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಪಟ್ಟಣ ಪಂಚಾಯತ್ ಅಧಿಕಾರಿಗಳಿಗೆ ಹಸ್ತಾಂತರ ಮಾಡಲಾಗಿದೆ. |

(ಸಂಖ್ಯೆ: ಆರ್‌ಡಿ 30 ಎಲ್‌ಜಿಎ 2024)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು